ಶಿಕ್ಷಕರ ಕೊರತೆ

1345(908); ಶ್ರೀ ಅರವಿಂದ್ ಚಂದ್ರಕಾಂತ ಪಾಟೀಲ್ (ಖಾನಾಪೂರ)

ಅ) ಬೆಳಗಾವಿ ಜಿಲ್ಲೆ ಖಾನಾಪೂರ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? (ಸಂಪೂರ್ಣ ವಿವರ ನೀಡುವುದು)

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬಂದಿದೆ

ಆ) ಖಾನಾಪೂರ ತಾಲೂಕಿನಲ್ಲಿ ಪ್ರಾಥಮಿಕ – 165 ಹಾಗೂ ಪ್ರೌಢ – 01 ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇಮಕ ಮಾಡಲಾಗಿದೆ. ಖಾಯಂ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ಈಗಾಗಲೇ ಟಿ.ಇ.ಟಿ ಪರೀಕ್ಷೆ ನಡೆಸಲಾಗಿರುತ್ತದೆ, ವ್ಯಂದ ಮತ್ತು ನೇಮಕಾತಿ ನಿಯಮಾವಳಿ ಪರಿಶೀಲನೆಯಲ್ಲಿದ್ದು ನಂತರ ಸಿ.ಇ.ಟಿ ಪರೀಕ್ಷೆ ನಡೆಸಲು ಕ್ರಮ ಕೈಗೊಳ್ಳಲಾಗುವುದು.

ಬಸವ ವಸತಿ ಯೋಜನೆ

1346(1527); ಶ್ರೀ ಅರವಿಂದ್ ಚಂದ್ರಕಾಂತ್ ಪಾಟೀಲ್ (ಖಾನಾಪೂರ)

ಅ) ಖಾನಾಪೂರ ತಾಲ್ಲೂಕಿನಲ್ಲಿ ಶೇಕಡ 65 ರಷ್ಟು ಜನ ಬಡತನ ರೇಖೆಗಿಂತ ಕೆಳಹಂತದಲ್ಲಿರುವವರಿದ್ದು, ಇವರಿಗಾಗಿ ವಸತಿ ಇಲಾಖೆಯಿಂದ ಕಳೆದ ವರ್ಷ ಖಾನಾಪೂರ ತಾಲ್ಲೂಕಿಗೆ 2000 ಮನೆಗಳನ್ನು ಬಸವ ವಸತಿ ಯೋಜನೆಯಡಿಯಲ್ಲಿ ಮಂಜೂರು ಮಾಡುವಂತೆ ಕೋರಲಾಗಿದ್ದ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗಡಿ ಭಾಗದ ಪ್ರದೇಶವಾಗಿರುವ ಈ ತಾಲ್ಲೂಕಿಗೆ ಬಸವ ವಸತಿ ಯೋಜನೆಯಿಂದ ಮನೆಗಳ ಮಂಜೂರಾತಿಯನ್ನು ಮಾಡಿಲ್ಲದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಇ) ಬಸವ ವಸತಿ ಯೋಜನೆಯಡಿಯಲ್ಲಿ ಮನೆಗಳ ಮಂಜೂರಾತಿಗೆ ಸರಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು)?

ಡಾ॥ ಎಂ.ಹೆಚ್. ಅಂಬರೀಷ್ (ವಸತಿ ಸಚಿವರು)

ಅ) ಖಾನಾಪೂರ ತಾಲ್ಲೂಕಿಗೆ ಹೆಚ್ಚುವರಿಯಾಗಿ 2000 ಮನೆಗಳನ್ನು ಮಂಜೂರು ಮಾಡುವ ಬಗ್ಗೆ, ಸರ್ಕಾರದಿಂದ ಅಯವ್ಯಯದಲ್ಲಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಪೂರಕವಾಗಿ ಪ್ರಸಕ್ತ ಸಾಲಿನಲ್ಲಿ ವಿವಿಧ ವಸತಿ ಯೊಜನೆಗಳಡಿಯಲ್ಲಿ ನೀಡಲಾಗುವ ಮನೆಗಳ ಗುರಿಯಲ್ಲಿ ಅರ್ಹ ಫಲಾನುಭವಿಗಳನ್ನು ನಿಯಮಾನುಸಾರ ಪರಿಗಣಿಸಿ ವಸತಿ ಸೌಕರ್ಯ ಕಲ್ಪಿಸಲು ಸರ್ಕಾರದಿಂದ ಸೂಚಿಸಲಾಗಿದೆ. ಅದರಂತೆ ಕ್ರಮ ವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರಿಗೆ ತಿಳಿಸಲಾಗಿದೆ.

ಆ) ಬಸವ ವಸತಿ ಯೋಜನೆಯಡಿ ಖಾನಾಪೂರ ತಾಲ್ಲೂಕಿಗೆ 2013–14 ಸಾಲಿನಲ್ಲಿ 1020 ಮನೆಗಳನ್ನು ಮಂಜೂರು ಮಾಡಲಾಗಿದೆ.

ಇ) ಬಸವ ವಸತಿ ಯೋಜನೆಯಡಿ ಮುಂದಿನ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯ ಮೇರೆಗೆ ಮನೆಗಳ ಗುರಿಯನ್ನು ನಿಗದಿಪಡಿಸಲಾಗುವುದು.